# ಸ್ವೀಪ್ ಸಮಿತಿ ಅಭಿಯಾನ; ಬಳ್ಳಾರಿ ಜಿಲ್ಲೆಯಲ್ಲಿ 15 ಸಾವಿರಕ್ಕೂ ಹೆಚ್ಚಿನ ವಿದ್ಯಾರ್ಥಿಗಳಿಂದ ಪೋಳಕರಿಗೆ ಪತ್ರ ಅಪ್ಪ, ಅಮ್ಮ ಮರಿಯದೇ ವೋಟ್ ಮಾಡಿ



ಬಳ್ಳಾರಿ,ಮಾ-: ಪ್ರೀತಿಯ ಅಪ್ಪ-ಅಮ್ಮ,ನಾನಲ್ಲಿ ಕ್ಷೇಮ, ಪರೀಕ್ಷೆಗೆ ಸಿದ್ಧತೆಯನ್ನು ಚೆನ್ನಾಗಿ ಮಾಡುತ್ತಿರುವೆ. ಈ ವರ್ಷ ಲೋಕಸಭೆ ಸಾರ್ವತ್ರಿಕ ಚುನಾವಣೆ ನಡೆಯಲಿದ್ದು, ಈಗಾಗಲೇ ನೀತಿ ಸಂಹಿತೆ ಜಾರಿಯಲ್ಲಿದೆ. ನೀವು ಯಾವುದೇ ಆಮಿಷಕ್ಕೆ ಒಳಗಾಗದೇ ಕಡ್ಡಾಯವಾಗಿ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಿ, ಅಣ್ಣನಿಗೂ ಮತದಾನ ಮಾಡಲು ತಿಳಿಸಿ.ನಿಮ್ಮ ಮಗು/ಮಗಳುಇದು ಮನೆಯಿಂದ ದೂರವಿದ್ದು, ಹಾಸ್ಟೆಲ್‌ಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ತಮ್ಮ ಪೋಳಕರಿಗೆ ಮತದಾನ ಮಾಡಲು ಬರೆದ ಪತ್ರಗಳು.ಲೋಕಸಭೆ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಈ ಬಾರಿ ಹೆಚ್ಚು ಹೆಚ್ಚು ಮತದಾರರು ಮತದಾನ ಪ್ರಕ್ರಿಯೆ ಕೈಗೊಳ್ಳಲು ಜಿಲ್ಲಾ ಸ್ವೀಪ್ ಸಮಿತಿ ವಿವಿಧ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಅದರಲ್ಲಿ ಬಳ್ಳಾರಿ ಜಿಲ್ಲಾ ಸ್ವೀಪ್ ಸಮಿತಿಯು 'ವಿದ್ಯಾರ್ಥಿಗಳಿಂದ ಪೋಳಕರಿಗೆ, ಒಡಹುಟ್ಟಿದವರಿಗೆ ಹಾಗೂ ನೆರೆಹೊರೆಯವರಿಗೆ ಪತ್ರ ಅಭಿಯಾನ' ಎಂಬ ವಿಶೇಳ ಜಾಗೃತಿ ಕೈಗೊಂಡಿದೆ.

ಅದರಂತೆ, ಲೋಕಸಭೆ ಸಾರ್ವತ್ರಿಕ ಚುನಾವಣೆ-2024ರ ಸಂಬಂಧ ಮತದಾರರಲ್ಲಿ ಮತದಾನ ಜಾಗೃತಿ ಮೂಡಿಸುವ ಅಂಗವಾಗಿ ಗುರುವಾರದಂದು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ 295 ಶಾಲೆಗಳು ಹಾಗೂ ವಸತಿನಿಲಯಗಳಲ್ಲಿನ ಸುಮಾರು 15 ಸಾವಿರಕ್ಕೂ ಹೆಚ್ಚಿನ ವಿದ್ಯಾರ್ಥಿಗಳಿಂದ ಪೋಳಕರಿಕರಿಗೆ ಪತ್ರ ಬರೆಯುವ ಮೂಲಕ ಪತ್ರ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.
ಬಳ್ಳಾರಿ ಜಿಲ್ಲೆಯಲ್ಲಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಹಾಸ್ಟೆಲ್ ವಿದ್ಯಾರ್ಥಿಗಳು ತಮ್ಮ ಪೋಳಕರಿಗೆ ಪತ್ರ ಬರೆದು ಚುನಾವಣೆಯ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಲು ಪ್ರೇರೇಪಿಸಲಾಯಿತು.

ಜಿಲ್ಲಾ ಮಟ್ಟದಲ್ಲಿ ಬಳ್ಳಾರಿಯ ಕೋಟೆ ಪ್ರದೇಶದ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಮತ್ತು ನಂತರದ ವಸತಿ ನಿಲಯದಲ್ಲಿ ಜಿಲ್ಲಾ ಸ್ವೀಪ್ ಸಮಿತಿಯ ನೋಡೆಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು, ವಿದ್ಯಾರ್ಥಿಗಳಿಗೆ ಚುನಾವಣೆ ಪ್ರಕ್ರಿಯೆ ಹಾಗೂ ಪ್ರಜಾಪ್ರಭುತ್ವದ ಬಲವರ್ಧನೆಗೆ ಮತದಾನದ ಅವಶ್ಯಕತೆ ಕುರಿತು ಮಾಹಿತಿಯನ್ನು ನೀಡಿದರು.

ತಮ್ಮ ಊರನ್ನು, ಮನೆಯನ್ನು ಬಿಟ್ಟು ಓದಲು ಆಗಮಿಸಿರುವ ನೀವುಗಳು ನಿಮ್ಮ ಪೋಳಕರಿಗೆ ಪತ್ರ ಬರೆಯುವ ಮೂಲಕ ಯಾವುದೇ ಆಮಿಷಕ್ಕೆ ಒಳಗಾಗದೇ ಸೂಕ್ತ ಅಭ್ಯರ್ಥಿಗೆ ಹಕ್ಕು ಚಲಾಯಿಸುವ ಕುರಿತು ಪ್ರೇರಣೆ ಮಾತುಗಳನ್ನು ಉಲ್ಲೇಖಿಸಿ ಪತ್ರ ಬರೆಯಬೇಕು ಎಂದು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.
ಜಿಲ್ಲಾ ಸ್ವೀಪ್ ಸಮಿತಿಯಿಂದ ಜಿಲ್ಲೆಯಲ್ಲಿ ವಿವಿಧ ಕಾರಣಗಳಿಂದ ಮತದಾನದಿಂದ ವಂಚಿತರಾದ ಮತದಾರರಲ್ಲಿ ಜಾಗೃತಿ ಮೂಡಿಸಿ, ಮತದಾನ ಪ್ರಮಾಣವನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಲಾಗಿದೆ. ಅದೇರೀತಿಯಾಗಿ ಕಡ್ಡಾಯ ಮತದಾನ ಕುರಿತು ಹೆಚ್ಚಿನ ಜಾಗೃತಿ ಮೂಡಿಸಲು ವಿವಿಧ ಅಭಿಯಾನ ಕೈಗೊಳ್ಳಲಾಗುತ್ತಿದ್ದು, ಹಾಸ್ಟೆಲ್ ವಿದ್ಯಾರ್ಥಿಗಳ ಮೂಲಕ ಪತ್ರ ಬರೆದು ಪೋಳಕ ಮತದಾರರಿಗೆ ಜಾಗೃತಿ ಮೂಡಿಸಲಾಗುತ್ತಿದೆ.

ಈ ಸಂದರ್ಭದಲ್ಲಿ ಜಿಪಂ ಯೋಜನಾ ನಿರ್ದೇಶಕ ವಾಗೀಶ್, ಜಿಪಂ ಸಹಾಯಕ ನಿರ್ದೇಶಕ ಬಸವರಾಜ ಹಿರೇಮಠ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ(ಗ್ರೇಡ್-1) ಮಮತಾ, ವಸತಿ ನಿಲಯದ ನಿಲಯಪಾಲಕರಾದ ಅಂಬಿಕಾ, ಉಳಾ, ಭಾರತಿ ಹಾಗೂ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳೆಲ್ಲರೂ ಸೇರಿ ರೂಪಿಸಿದ್ದ "ಒಂದು ಕ್ಯಾಂಡಲ್ ನಮ್ಮ ರಾತ್ರಿ ಬೆಳಗುತ್ತೆ, ಒಂದು ವೋಟ್ ನಮ್ಮ ಜೀವನ ಬೆಳಗಿಸುತ್ತೆ" ಎಂಬ ಬೃಹತ್ ಗಾತ್ರದ ರಂಗೋಲಿಯು ಆಕರ್ಳಕವಾಗಿತ್ತು.ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ತಾಲ್ಲೂಕು ಸ್ವೀಪ್ ನೋಡೆಲ್ ಅಧಿಕಾರಿಗಳು ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಶಾಲೆಗಳ ಮುಖ್ಯ ಗುರುಗಳು ಮತ್ತು ಶಿಕ್ಷಕರ ಸಮ್ಮುಖದಲ್ಲಿ ವಿದ್ಯಾರ್ಥಿಗಳಿಂದ ಪೋಳಕರಿಕರಿಗೆ ಪತ್ರ ಬರೆಯುವ ಮೂಲಕ ಪತ್ರ ಅಭಿಯಾನ ನಡೆಸಲಾಯಿತು.

# ಲೋಕಸಭೆ ಚುನಾವಣೆ-ಜಿಲ್ಲೆಯಾದ್ಯಂತ ಮಾದರಿ ನೀತಿ ಸಂಹಿತೆ ಕಟ್ಟುನಿಟ್ಟಿನ ಜಾರಿಅನಧಿಕೃತ ಕುಕ್ಕರ್, ಸ್ಟೋವ್, ಫ್ಯಾನ್ ಇತ್ಯಾದಿ ವಶ-ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಮಾಹಿತಿ

ಬಳ್ಳಾರಿ,ಮಾ-: ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಜಿಲ್ಲೆಯಾದ್ಯಂತ ಮಾದರಿ ನೀತಿ ಸಂಹಿತೆಯು ಕಟ್ಟುನಿಟ್ಟಾಗಿ ಜಾರಿಯಾಗಿದ್ದು, ಗುರುವಾರದಂದು ಬಳ್ಳಾರಿ ನಗರದಲ್ಲಿ ಸೂಕ್ತ ದಾಖಲೆ ಇಲ್ಲದ 300 ಕುಕ್ಕರ್, 150 ಸ್ಟೋವ್, 66 ಸೀಲಿಂಗ್ ಫ್ಯಾನ್ ಸೇರಿದಂತೆ ಒಟ್ಟು ರೂ.2.58 ಲಕ್ಷ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.



ಮಾದರಿ ನೀತಿ ಸಂಹಿತೆ ಉಲ್ಲಂಘಿಸಿ ಅನಧಿಕೃತವಾಗಿ ಸಾಗಿಸುತ್ತಿದ್ದ 576.18 ಲೀಟರ್ (ಅಂದಾಜು ರೂ.2,26,605 ಮೌಲ್ಯ) ಮದ್ಯ ಮತ್ತು ಎರಡು ವಾಹನ (ರೂ.1 ಲಕ್ಷ ಮೌಲ್ಯದ) ಗಳನ್ನು ವಶಪಡಿಸಿಕೊಳ್ಳಲಾಗಿದೆ.ಅಬಕಾರಿ ಪೊಲೀಸ್ ಅಧಿಕಾರಿಗಳಿಂದ 463.13 ಲೀಟರ್ (ರೂ.175148 ಮೌಲ್ಯ) ಮದ್ಯ ಮತ್ತು ಪೊಲೀಸ್ ಇಲಾಖೆ ಅಧಿಕಾರಿಗಳಿಂದ 113.05 ಲೀಟರ್ (ರೂ.51457 ಮೌಲ್ಯ) ಮದ್ಯ ವಶಪಡಿಸಿಕೊಳ್ಳಲಾಗಿದೆ. ಈವರೆಗೆ ಒಟ್ಟು 40 ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ತಾಯಿ,ಮಗುವಿನ ಆರೈಕೆಯ ಕುರಿತು ಕಾಳಜಿ ವಹಿಸಲು ಪ್ರಯತ್ನಿಸೋಣ-ಡಾ.ಯು.ಟಿ.ವಿಜಯ್



ಬಳ್ಳಾರಿ ಮಾ-: .ಕುಟುಂಬದ ಕಣ್ಣುಗಳಾದ ತಾಯಿ ಮತ್ತು ಮಗುವಿನ ಆರೋಗ್ಯ ತಪಾಸಣೆ, ಸಕಾಲದಲ್ಲಿ ಪೌಷ್ಟಿಕ ಆಹಾರ ಒದಗಿಸುವಿಕೆ, ವಾಸಮಾಡುವ ಮನೆ ಹಾಗೂ ಸುತ್ತಲಿನ ಪರಿಸರ ಶುಚಿಯಾಗಿಡುವ ಮೂಲಕ ಸ್ವಾಸ್ಥ್ಯ ಸಮಾಜ ಕಾಪಾಡುವ ಹೊಣೆಗಾರಿಕೆ ಎಲ್ಲರ ಜವಾಬ್ದಾರಿಯಾಗಿದೆ ಎಂದು ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಯು.ಟಿ.ವಿಜಯ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಆಸ್ಪತ್ರೆಯ ನಗರದ ಡಿಎಚ್ಬಿ ಹಾಲ್‌ನಲ್ಲಿ ಮಹಿಳೆಯರು ಮತ್ತು ಮಕ್ಕಳ ಆರೋಗ್ಯ ನೈರ್ಮಲ್ಯ ಮತ್ತು ಪೌಷ್ಟಿಕತೆಯ ಪ್ರಾಮುಖ್ಯತೆ ಕುರಿತು ಆಶಾ ಕಾರ್ಯಕರ್ತೆಯರಿಗೆ ಹಮ್ಮಿಕೊಂಡಿದ್ದ
ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಪ್ರಸ್ತು ತ ದಿನಗಳಲ್ಲಿ ಗುಣ ಮಟ್ಟದ ಆರೋಗ್ಯ ಸೇವೆಗಳನ್ನು ನೀಡಲಾಗುತ್ತದೆ. ಇದರ ಜೊತೆಗೆ ಗರ್ಭಿಣಿ ತಾಯಂದಿರು ಹಾಗೂ ನವಜಾತ ಶಿಶುಗಳಿಗೆ, ಯಾವುದೇ ತೊಂದರೆ ಕಂಡು ಬಂದರೆ ಕುಟುಂಬದ ಸದಸ್ಯರು ತಮ್ಮ ಜವಾಬ್ದಾರಿ ನಿಭಾಯಿಸಲು ಮುಂದೆ ಬರಬೇಕು ಎಂದು ತಿಳಿಸಿದರು.

ಕಾರ್ಯಾಗಾರಕ್ಕೆ ಚಾಲನೆ ನೀಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶಬಾಬು ಅವರು ಮಾತನಾಡಿ, ಕ್ಷೇತ್ರಮಟ್ಟದಲ್ಲಿ ಮನೆ ಭೇಟಿ ಮೂಲಕ ತಾಯಿ ಮಗುವಿನ ಕಾಳಜಿ ಹಾಗೂ ಗರ್ಭಿಣಿಯೆಂದು ತಿಳಿದ ದಿನದಿಂದ ಸಕಾಲದಲ್ಲಿ ತಾಯಿ ಕಾರ್ಡ್ ಪಡೆಯಬೇಕು.

ಟಿಡಿ ಚುಚ್ಚುಮದ್ದು, ಕನಿಷ್ಟ 180 ಕಬ್ಬಿಣಾಂಶ ಮಾತ್ರೆ ಸೇವನೆ, ಒಂದು ಬಾರಿ ತಪ್ಪದೆ ಸ್ಕ್ಯಾನಿಂಗ್, ಹೆರಿಗೆಯನ್ನು ಸರಕಾರಿ ಆಸ್ಪತ್ರೆಯಲ್ಲಿ ಮಾಡಿಸಲು ನಿರ್ಧಾರ, ಗಂಡಾಂತರ ಗರ್ಭಿಣಿಯಾಗಿದ್ದಲ್ಲಿ ವೈದ್ಯರು ನೀಡುವ ನಿರ್ದೇಶನವನ್ನು ತಪ್ಪದೆ ಪಾಲಿಸುವುದಕ್ಕೆ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಮಗುವಿನ ಜನನದ ನಂತರ ಎಲ್ಲಾ ಚುಚ್ಚುಮದ್ದು ಹಾಕಿಸಬೇಕು. ಪ್ರಸ್ತುತ ಜಿಲ್ಲೆಯಲ್ಲಿ ವಾಟ್ಸಾಪ್ ಗ್ರೂಪ್ ರಚಿಸಿ ತಾಯಿ ಮಗುವಿನ ಆರೈಕೆ ಮಾಡಲು ಕ್ರಮ ವಹಿಸಲಾಗಿದೆ.

ಸ್ಥಳೀಯವಾಗಿ ದೊರಕುವ ತರಕಾರಿ ಋತುಮಾನ ಅನುಗುಣವಾಗಿ ದೊರಕುವ ಹಣ್ಣುಗಳನ್ನು ನೀಡಲು ಪಾಲಕರು ಮುತುವರ್ಜಿವಹಿಸಬೇಕು ಎಂದು ವಿನಂತಿಸಿದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ ಮಾತನಾಡಿ, ಜಿಲ್ಲಾ ಆಸ್ಪತ್ರೆಯಲ್ಲಿ ಉತ್ತಮ ಗುಣಮಟ್ಟದ ಸೇವೆಗಳನ್ನು ನೀಡಲಾಗುತ್ತಿದ್ದು, ತೀವ್ರ ರೀತಿಯ ತೊಂದರೆಗಳ ಪೂರ್ವದಲ್ಲಿ ಗರ್ಭಿಣಿ ಅಥವಾ ಮಗುವನ್ನು ಆಸ್ಪತ್ರೆಗೆ ಕರೆತನ್ನಿ ಎಂದು ವಿನಂತಿಸಿದರು.

ವೇದಿಕೆ ಮೇಲೆ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಕೆಎಸ್ಟಿಸಿಎಸ್ಟಿಟಿಯ ಯೋಜನಾ ನಿರ್ದೇಶಕ ಡಾ.ಸೈಯದ್ ಸಮೀರ್, ಜಿಲ್ಲಾ ಪಂಚಾಯತ್‌ನ ಯೋಜನಾ ಅಧಿಕಾರಿ, ಜಿ.ಎಲ್.ಬದಿ, ರಾಮಚಂದ್ರ ರೆಡ್ಡಿ, ಡಾ.ವೆಂಕಟೇಶ, ಡಾ.ಸುರೇಖಾ, ಡಾ.ವಿಶಾಲಾಕ್ಷಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಜಿಲ್ಲಾ ಆಶಾ ಮೇಲ್ವಿಚಾರಣಾಧಿಕಾರಿ ರಾಘವೇಂದ್ರ, ಬಿಹೆ[illegible]ಇಓ ಶಾಂತಮ್ಮ ಉಪ್ಪಾರ, ನೇತ್ರಾ ಸೇರಿದಂತೆ ಆಶಾ ಕಾರ್ಯಕರ್ತೆಯರು ಹಾಗೂ ಇತರರು ಉಪಸ್ಥಿತರಿದ್ದರು.

ಕಾರ್ಯಾಗಾರದಲ್ಲಿ 'ಸಂತುಷ್ಟ ಬಾಯಿಯೇ ಸಂತುಷ್ಟ ದೇಹ' ಎಂಬ ಘೋಳ ವಾಕ್ಯದೊಂದಿಗಿನ ಬಾಯಿ ಆರೋಗ್ಯ ಭಿತ್ತಿಪತ್ರಗಳನ್ನು ಬಿಡುಗಡೆ ಮಾಡಲಾಯಿತು.

# ಬಳ್ಳಾರಿ-ಮಾದರಿ ನೀತಿ ಸಂಹಿತೆ ಉಲ್ಲಂಘನೆ 629.94 ಲೀ. ಮದ್ಯ, ರೂ.26 ಲಕ್ಷ ನಗದು, ಗಾಂಜಾ ವಶ-ಡಿಸಿ ಮಿಶ್ರಾ



ಬಳ್ಳಾರಿ,ಮಾ-:ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಜಿಲ್ಲೆಯಾದ್ಯಂತ ಮಾದರಿ ನೀತಿ ಸಂಹಿತೆಯು ಕಟ್ಟುನಿಟ್ಟಾಗಿ ಜಾರಿ ಯಾಗಿದ್ದು, ಶುಕ್ರವಾರದಂದು ಮಾದರಿ ನೀತಿ ಸಂಹಿತೆ ಉಲ್ಲಂ ಘಿಸಿ ಅನಧೀಕೃತವಾಗಿ ಸಾಗಿಸುತ್ತಿದ್ದ 629.94 ಲೀಟರ್ (ರೂ.2,53, 141 ಮೌಲ್ಯ) ಮದ್ಯ, ರೂ.26 ಲಕ್ಷ ನಗದು ಹಣ ವಶಪಡಿಸಿಕೊಂಡು ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ. ಸಂಡೂರು ತಾಲ್ಲೂಕಿನ ಚೋರನೂರು ಬಳಿ ಅಕ್ರಮವಾಗಿ ಸಾಗಾಣೆ ಮಾಡುತ್ತಿದ್ದ 130 ಗ್ರಾಂ (ರೂ.4500 ಮೌಲ್ಯದ) ಗಾಂಜಾ ಮತ್ತು ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ರೂ.26 ಲಕ್ಷ ನಗದು ಹಣ, ದ್ವಿಚಕ್ರ ವಾಹನ ವಶಪಡಿಸಿಕೊಳ್ಳಲಾಗಿದೆ.ಅಬಕಾರಿ ಪೊಲೀಸ್ ಅಧಿಕಾರಿಗಳಿಂದ 500.87 ಲೀಟರ್ (ರೂ.195960 ಮೌಲ್ಯ) ಮದ್ಯ ಮತ್ತು ಪೊಲೀಸ್ ಇಲಾಖೆ ಅಧಿಕಾರಿಗಳಿಂದ 129.07 ಲೀಟರ್ (ರೂ.57181 ಮೌಲ್ಯ) ಮದ್ಯ ಮತ್ತು ಒಂದು ವಾಹನ (ರೂ.50 ಸಾವಿರ ಮೌಲ್ಯ) ವಶಪಡಿ ಸಿಕೊಳ್ಳಲಾಗಿದೆ. ಈವರೆಗೆ ಒಟ್ಟು 44 ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ಮಾರ್ಚ್ 30 ರಂದು ಶ್ರೀ ಶ್ರೀ ನಿತಾಯ ಗೌರಂಗ ಶೋಭಯಾತ್ರೆ-ಈಶ್ವರಪುರಿದಾಸ ಇಸ್ಕಾನ್



ಬಳ್ಳಾರಿ ಮಾ -: ಗಣಿನಾಡು ಬಳ್ಳಾರಿ ನಗರದ ಕಪ್ಪಗಲ್ಲು ರಸ್ತೆಯಲ್ಲಿ ಇರುವ ಇಸ್ಕಾನ್ ದೇವಸ್ಥಾನದವರಿಂದ ಶ್ರೀ ಶ್ರೀ ನಿತಾಯ ಗೌರಂಗ ಶೋಭಯಾತ್ರೆ ಮಾರ್ಚ್ 30 ರಂದು, ಶನಿವಾರ ಸಂಜೆ 5 ಗಂಟೆ 30 ನಿಮಿಷಕ್ಕೆ ಬಿಡಿಎ ಮೈದಾನದಲ್ಲಿ ಚಾಲನೆ ನೀಡಲಾಗುತ್ತದೆ ಎಂದು ಇಸ್ಕಾನ್ ಬಳ್ಳಾರಿ ಸಂಚಾಲಕರಾದ ಈಶ್ವರಪುರಿದಾಸ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಗರದ ಬಿಡಿಎ ಮೈದಾನದಿಂದ ಸಂಜೆ 5 ಗಂಟೆ 30 ನಿಮಿಷಕ್ಕೆ ಚಾಲನೆ ನೀಡಲಾಗುತ್ತದೆ ನಂತರ, 6 ಗಂಟೆಗೆ ಶೋಭಯಾತ್ರೆ ಆರಂಭವಾಗಿ ರಾಯಲ್ ವೃತ್ತದ ಮೂಲಕ ಮಹಾನಗರ ಪಾಲಿಕೆಯ ಮಾರ್ಗವಾಗಿ, ದುರ್ಗಮ್ಮ ಗುಡಿ ಮೂಲಕ ಕಪ್ಪಗಲ್ಲು ರಸ್ತೆ ಮಾರ್ಗವಾಗಿ ಇಸ್ಕಾನ್ ದೇವಸ್ಥಾನ ತಲುಪುತ್ತವೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಶೋಭಯಾತ್ರೆ ಯಲ್ಲಿ ಬಳ್ಳಾರಿ ನಗರದ ಸರ್ವ ಭಕ್ತರು ಭಾಗವಹಿಸಬೇಕೆಂದು ಈಶ್ವರಪುರಿದಾಸ ಇಸ್ಕಾನ್ ಬಳ್ಳಾರಿ ಸಂಚಾಲಕರು ಮನವಿ ಮಾಡಿಕೊಂಡಿದ್ದಾರೆ.

# ಹೆಣ್ಣು ಕನಿಷ್ಠ, ಗಂಡು ಶ್ರೇಷ್ಠ ಧೋರಣೆ ತೊಲಗಿಸಿ-ಕೆ.ನೀಲಾ




ಬಳ್ಳಾರಿ,ಮಾ.-:ಸಮಾಜದಲ್ಲಿ ಹೆಣ್ಣು ಕನಿಷ್ಠ, ಗಂಡು ಶ್ರೇಷ್ಠ ಎಂಬ ಧೋರಣೆಯನ್ನು ತೊಲಗಿಸಬೇಕು. ಮಹಿಳೆಯರಿಗೆ ಸ್ಥಾನಮಾನ, ಮೀಸಲಾತಿಗಳು ನೀಡಬೇಕು ಎಂದು ಅಖಿಲ ಭಾರತೀಯ ಜನವಾದಿ ಮಹಿಳಾ ಸಂಘಟನೆಯ ಹೋರಾಟಗಾರ್ತಿ ಕೆ.ನೀಲಾ ಅವರು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಗುರುವಾರ ಸಸ್ಯಶಾಸ್ತ್ರ ಅಧ್ಯಯನ ವಿಭಾಗ ಹಾಗೂ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಭಾಗದ ಜಂಟಿ ಸಹಭಾಗಿತ್ವದಲ್ಲಿ ಏರ್ಪಡಿಸಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿ ಗೌರವಾನ್ವಿತ ಬದುಕು ಕಟ್ಟಿಕೊಳ್ಳುವ ವೈಜ್ಞಾನಿಕ ತಳಹದಿಯ ಮಾದರಿಗಳನ್ನು ರೂಪಿಸುವ ಚಿಂತನೆ ದೇಶದಲ್ಲಿ ನಡೆಯಬೇಕಿದೆ. ಗ್ಲೋರಿಯಾ ಸ್ಟಿನೇಮ್ ಹೇಳಿದಂತೆ ಮಾನವ ಹಾಗೂ ಮಹಿಳಾ ಹಕ್ಕುಗಳ ಬಗ್ಗೆ ಕಾಳಜಿ ವಹಿಸುವುದು ಅತಿ ಮುಖ್ಯವಾಗಿದೆ. ಸ್ತ್ರೀ ಸಮಾನತೆಗೆ ಪ್ರಾತಿನಿಧ್ಯತೆ ದೊರಕಿಸಲು ವಿಶ್ವವಿದ್ಯಾಲಯಗಳು ಪೂರಕವಾಗಿ ಕಾರ್ಯ ನಿರ್ವಹಿಸಬೇಕು ಎಂದು ಅಭಿಪ್ರಾಯ ಪಟ್ಟರು.ವಿಜ್ಞಾನ-ತಂತ್ರಜ್ಞಾನದ ಉತ್ತುಂಗ ಯುಗದಲ್ಲೂ ದೇಶದಲ್ಲಿ ಪ್ರತಿ 20 ನಿಮಿಷದಲ್ಲಿ ಒಂದು ಅತ್ಯಾಚಾರ ನಡೆಯುತ್ತಿದ್ದು, ಮಹಿಳೆಯರ ಶೋಷಣೆ, ದೌರ್ಜನ್ಯ ನಿರಂತರವಾಗಿ ಘಟಿಸುತ್ತಿರುವುದು ವಿಷಾದನೀಯ ಸಂಗತಿ ಎಂದು ಕಳವಳ ವ್ಯಕ್ತಪಡಿಸಿದರು.

ಹೆಣ್ಣು ಕನಿಷ್ಠ, ಗಂಡು ಶ್ರೇಷ್ಠ ಎನ್ನುವುದು ಅವೈಜ್ಞಾನಿಕ ವಿಚಾರ ತಲ-ತಲಾಂತರದಿಂದ ಬೇರೂರಿದೆ. ಸಂಪ್ರದಾಯದ ಹೆಸರಲ್ಲಿ ಹೆಣ್ಣು ಮಕ್ಕಳಿಗೆ ಹುಟ್ಟಿನಿಂದಲೇ ಅಬಲೆ ಎಂಬ ಪಟ್ಟ ಕಟ್ಟಿ ತಲೆ ತಗ್ಗಿಸಿ ನಡೆಯುವಂತೆ ಪ್ರಚೋದಿಸುವ ವೈಖರಿ ಖೇದಕರ. ತಾಯಿಯಾಗಿ, ಮಡದಿಯಾಗಿ, ಮಗಳಾಗಿ, ಕುಟುಂಬದ ಆಧಾರ ಸ್ತಂಭವಾದ ಹೆಣ್ಣನ್ನು ದೇಹವಾಗಿ ನೋಡದೆ ಸಹಜೀವಿಯಾಗಿ ಕಾಣಬೇಕು ಎಂದು ತಿಳಿಸಿದರು.

ಮಹಿಳಾ ಸಬಲೀಕರಣಕ್ಕೆ ವಿಶ್ವವಿದ್ಯಾಲಯಲದಲ್ಲಿ ಆಂತರಿಕ ದೂರು ಸಮಿತಿ ರಚನೆ ಮಾಡುವುದು, ಮಹಿಳಾ ಸಿಬ್ಬಂದಿ ಸಂಘ ರಚಿಸಿ ಅದರ ಅಡಿಯಲ್ಲಿ ಈ ಪ್ರದೇಶದಲ್ಲಿರುವ ಪ್ರಗತಿಪರ ಮಹಿಳಾ ಸಂಘಟನೆಗಳೊಂದಿಗೆ ವೈಜ್ಞಾನಿಕ ವಿಚಾರಧಾರೆಗಳನ್ನು ಬಿತ್ತರಿಸುವ ಕಾರ್ಯಕ್ರಮ ಆಯೋಜಿಸಬೇಕು ಎಂದು ಸಲಹೆ ನೀಡಿದರು. ಮಹಿಳಾ ಶಿಕ್ಷಣಕ್ಕೆ ಪ್ರೋತ್ಸಾಹಿಸಿದ ಜ್ಯೋತಿಬಾ ಫುಲೆ, ಸಂವಿಧಾನದ ಹರಿಕಾರ ಬಾಬಾ ಸಾಹೇಬ್ ಅಂಬೇಡ್ಕರ್, ಬುದ್ಧ, ಬಸವಾದಿ ಮಾದರಿಯ ಪುರುಷರಂತೆ ಈ ಸಮಾಜದಲ್ಲಿರುವ ಎಲ್ಲ ಪುರುಷರು ಮಹಿಳೆಯರ ಹಿತಚಿಂತನೆಗೆ ಮುಂದಾಗಬೇಕು ಎಂದರು.

ವಿಶ್ವವಿದ್ಯಾಲಯದ ಕುಲಸಚಿವರಾದ ಎಸ್.ಎನ್.ರುದ್ರೇಶ್ ಅವರು ಮಾತನಾಡಿ, ಮಹಿಳೆಯರು ಇಂದು ಬಹುತೇಕ ಎಲ್ಲಾ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಅವರಿಗೆ ಗೃಹ ಬಂಧಿಯಾಗಿಸದೆ ಸ್ವಾತಂತ್ರ್ಯ ನೀಡಿದಲ್ಲಿ ಅವರು ಸಹ ಸಮಾಜಮುಖಿ ಸೇವೆಗಳಲ್ಲಿ ಪಾಲ್ಗೊಳ್ಳುತ್ತಾರೆ. 12 ಶತಮಾನದಲ್ಲೇ ಬಸವಣ್ಣನವರ ಅನುಭವ ಮಂಟಪದಲ್ಲಿ ಮಹಿಳಾ ಸಮಾನತೆ ಕುರಿತು ಚರ್ಚೆಗಳಾಗಿದ್ದನ್ನು ಉದಾಹರಣೆಗಳೊಂದಿಗೆ ವಿವರಿಸಿದರು. ಜಗಜ್ಯೋತಿ ಬಸವೇಶ್ವರರು, ದೇವರ ದಾಸಿಮಯ್ಯ, ಅಕ್ಕಮಹಾದೇವಿಯಂತಹ ಮಹಾನ್ ಜೀವಿಗಳು ತಮ್ಮ ವಚನಗಳ ಮೂಲಕ ಲಿಂಗಸಮಾನತೆ ಬಗ್ಗೆ ಜಾಗೃತಿ ಮೂಡಿಸಿದ್ದರು ಎಂದರು. ಮಹಿಳಾ ಸಿಬ್ಬಂದಿ ಸಬಲೀಕರಣಕ್ಕೆ ವಿಶ್ವವಿದ್ಯಾಲಯವು ಪೂರಕ ಕಾಯಕ್ರಮಗಳನ್ನು ರೂಪಿಸಿದೆ ಎಂದು ಹೇಳಿದರು.
ವಿವಿಯ ಕುಲಸಚಿವರು (ಮೌಲ್ಯಮಾಪನ) ಪ್ರೊ. ರಮೇಶ್ ಓಲೇಕಾರ್ ಮಾತನಾಡಿ, ಮಹಿಳೆಯರಲ್ಲಿ ಇತ್ತೀಚಿನ ಪ್ರವೃತ್ತಿಯಲ್ಲಿ ಹಿಂಜರಿಕೆ ಕಡಿಮೆಯಾಗಿದೆ. ಮಹಿಳಾ ಹೋರಾಟಗಳು ಇನ್ನೂ ಹೆಚ್ಚಾಗಬೇಕಿದೆ. ಮಹಿಳಾ ಪ್ರಾತಿನಿಧಿಕತ್ವದ ಭಾಗವಾಗಿ ವಿಶ್ವವಿದ್ಯಾಲಯದ ಪರೀಕ್ಷಾ ಕಾರ್ಯಚಟುವಟಿಕೆಗಳ ಎಲ್ಲ ಸಮಿತಿಗಳಲ್ಲಿ ಒಬ್ಬ ಮಹಿಳಾ ಪ್ರತಿನಿಧಿಯನ್ನು ನೇಮಕ ಮಾಡಲಾಗುತ್ತಿದೆ ಎಂದು ತಿಳಿಸಿದರು.

ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಕೆ.ಎಂ.ಮೇತ್ರಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಅನಾದಿ ಕಾಲದಿಂದಲೂ ಪುರುಷರಿಗಿಂತ ಮಹಿಳೆಯರು ತಮ್ಮ ಹಕ್ಕುಗಳಿಗಾಗಿ ಹೆಚ್ಚು ಹೋರಾಡುತ್ತಾ ಸಾಗಿದ್ದಾರೆ. ಪ್ರತಿಯೊಂದು ಕ್ಷೇತ್ರದಲ್ಲೂ ಮಹಿಳೆಯರು ತಮಗಾಗಿ ನಿರ್ದಿಷ್ಟ ಮೀಸಲಾತಿ ಬಯಸದೆ, ಸಮಾನ ಪ್ರಾಶಸ್ತ್ಯ ನೀಡುವಂತೆ ಹಕ್ಕೊತ್ತಾಯ ಮಾಡಬೇಕು. ಈ ನಿಟ್ಟಿನಲ್ಲಿ ಮುಂಚೂಣಿಯಲ್ಲಿರುವ ಮಹಿಳಾ ಹೋರಾಟಗಾರರು ಮುಂದಾಗಬೇಕು ಎಂದು ತಿಳಿಸಿದರು.

ತಳ ಸಮುದಾಯಗಳಲ್ಲಿ ಇಂದಿಗೂ ಬುಡಕಟ್ಟು ಜನಾಂಗದಲ್ಲಿ ಹೆಣ್ಣು ಮಗು ಜನಿಸಿದರೆ ಸಂಭ್ರಮಿಸುತ್ತಾರೆ. ಕೆಲವು ಸಮುದಾಯಗಳಲ್ಲಿ ಮುಟ್ಟಾದ ಮಹಿಳೆ ಅಥವಾ ಬಾಣಂತಿಯನ್ನು ಪ್ರತ್ಯೇಕವಾಗಿ ಗುಡಿಸಲುಗಳಲ್ಲಿ ಇರಿಸುತ್ತಾರೆ. ಕೆಲವರು ಇದನ್ನು ಮಹಿಳಾ ಶೋಷಣೆ ಎಂದು ಬಿಂಬಿಸಿದ್ದಾರೆ. ಆದರೆ ಪ್ರಾಚೀನ ಕಾಲದಲ್ಲಿ ಪದ್ಧತಿಯಂತೆ ಗುಡಿಸಲನ್ನು ಆಯುರ್ವೇದಿಕ ಬೇರು, ಸೊಪ್ಪುಗಳಿಂದ, ಮರಗಿಡಗಳ ಬಳಸಿ ನಿರ್ಮಿಸಿ ಅದರಲ್ಲಿ ಇಂತಹ ಮಹಿಳೆಯರನ್ನು ಕೆಲಕಾಲ ವಾಸಿಸಲು ಬಿಡುತ್ತಿದ್ದರು. ಇದರಿಂದ ಅವರಿಗೆ ಸೋಂಕುಗಳಿಂದ ರಕ್ಷಣೆ ನೀಡಿ ಆರೋಗ್ಯ ಕಾಪಾಡಿಕೊಳ್ಳಲು, ಇನ್ನಿತರ ಮನೆಗೆಲಸಗಳಿಂದ ಮುಕ್ತಿ ನೀಡಲು, ಮಗುವಿನ ಆರೈಕೆ ಮಾಡಲು ಸಹಾಯವಾಗುತ್ತಿತ್ತು. ಈ ಪದ್ಧತಿ ವೈದ್ಯಕೀಯ ಕ್ಷೇತ್ರ ಮುನ್ನೆಲೆಗೆ ಬರುವ ಪೂರ್ವ ಹಂತದಿಂದಲೇ ಜಾರಿಯಲ್ಲಿತ್ತು ಎಂದರು.ಭಿಕ್ಷಾಟನೆ ನಿಷೇಧ ಕಾಯ್ದೆ, ಅಲೆಮಾರಿ ಪುನರ್ವಸತಿ ಮುಂತಾದ ಯೋಜನೆಗಳಿಂದ ಬುಡಕಟ್ಟು ಜನಾಂಗದ ಹೆಣ್ಣು ಮಕ್ಕಳು ಹೆಚ್ಚಾಗಿ ಶೋಷಣೆಗೆ ಒಳಗಾಗಿದ್ದಾರೆ. ಕುಟುಂಬ ನಿರ್ವಹಣೆಗೆ ಅನೇಕ ಮಹಿಳೆಯರು ಒಲ್ಲದ ಮನಸ್ಸಿನಿಂದ ಲೈಂಗಿಕ ಕಾರ್ಯಕರ್ತರಾಗುತ್ತಾರೆ. ಇದನ್ನು ತಡೆಯಲು ಮಾರ್ಗೋಪಾಯಗಳನ್ನು ಕಂಡುಕೊಳ್ಳಲು ಮಾನವ ಜನಾಂಗ ಮುಂದಾಗಬೇಕು ಎಂದು ಕರೆ ನೀಡಿದರು.ಇತ್ತೀಚೆಗೆ ವಿಶ್ವವಿದ್ಯಾಲಯದ ಮಹಿಳೆಯರಿಗಾಗಿ ಆಯೋಜಿಸಿದ್ದ ವಿವಿಧ ಕ್ರೀಡೆಗಳಲ್ಲಿ ವಿಜೇತರಾದವರಿಗೆ ಪಶಸ್ತಿ ಮತ್ತು ಪ್ರಮಾಣ ಪತ್ರಗಳನ್ನು ವಿತರಿಸಿದರು.ಹಾಸ್ಯ ಕಲಾವಿದ ಕೂಡ್ಲಿಗಿ ಕೊಟ್ರೇಶ್ ಅವರಿಂದ ಹಾಸ್ಯಸಂಜೆ ಏರ್ಪಡಿಸಲಾಗಿತ್ತು. ಬಳಿಕ ಹಿರಿಯ ರಂಗ ಕಲಾವಿದ ಗಣೇಶ ಅಮೀನಗಡ ಅವರ ತಂಡದಿಂದ 'ಕೌದಿ' ನಾಟಕ ಪ್ರದರ್ಶನಗೊಂಡಿತು.ಕಾರ್ಯಕ್ರಮವನ್ನು ಸಸ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಸಿದ್ದೇಶ್ವರಿ ನಿರೂಪಿಸಿದರು. ಡಾ. ಕೃಷ್ಣವೇಣಿ ಅತಿಥಿಗಳನ್ನು ಸ್ವಾಗತಿಸಿದರು. ಡಾ.ಕವಿತಾ ಸಾಗರ ಅತಿಥಿ ಪರಿಚಯ ಮಾಡಿದರು. ಕಾರ್ಯಕ್ರಮದ ಸಂಯೋಜಕರಾದ ಡಾ. ಉಮಾರೆಡ್ಡಿ, ಡಾ. ಶಶಿಧರ್ ಕೆಲ್ಲೂರ್ ವಂದಿಸಿದರು.ಈ ವೇಳೆ ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

# ಬೇಸಿಗೆಯಲ್ಲಿ ಹಾವುಗಳಿಂದ ಸಾರ್ವಜನಕರು ಎಚ್ಚರದಿಂದಿರಬೇಕು-ಸಮೀರ್ ಸೇಠ್



ಬಳ್ಳಾರಿ ಮಾ -: ಹಾವುಗಳು ಅತೀ ಹೆಚ್ಚು ಬೇಸಿಗೆಯಲ್ಲಿ ಹೊರಗೆ ಬರುತ್ತವೆ, ಹಾಗಾಗಿ ಅವುಗಳಿಂದ ಸಾರ್ವಜನಕರು ಜಾಗ್ರತೆ ವಹಿಸಬೇಕು ಎಂದು ವನ್ಯ ಜೀವಿ ಸಂರಕ್ಷಣಾ ವೇದಿಕೆಯ ಅಧ್ಯಕ್ಷ ಸಮೀರ್ ಸೇಠ್ ಮನವಿ ಮಾಡಿದ್ದಾರೆ. ಹಾವುಗಳಿಂದ ಸಾರ್ವಜನಕರು ಎಚ್ಚರ ವಹಿಸಬೇಕು, ಹಾವು ಕಚ್ಚಿದಾಗ ನಾಟಿ ಔಷಧಿಗಳಿಗೆ ಮಾರು ಹೋಗಿ ಪ್ರಾಣ ಕಳುಕೊಳ್ಳುವುದನ್ನು ತಡೆಯಬೇಕು ಹಾವು ಕಚ್ಚಿದಾಗ ಕೊಡಲೇ ಸಾರ್ವಜನಕರು ಸರಕಾರಿ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆಯಬೇಕು, ಅಲ್ಲದೇ ತಮ್ಮ ತಮ್ಮ ಮನೆಗಳು ಹಾಗೂ ಮನೆಯ ಹಿತ್ತಲನ್ನು ಸ್ವಚ್ಛವಾಗಿಟ್ಟುಕೊಳ್ಳಿ ಏಕೆಂದರೆ ಬಿಸಿಲಿನ ತಾಪಕ್ಕೆ ಅಡಗಿ ಕೂತ ಎಳ್ಲೂ ಹಾವುಗಳು ಈಗ ಹೊರ ಬರುತ್ತವೆ ಹಾಗಾಗಿ ಬೇಸಿಗೆ ಮುಗಿಯುವ ತನಕ ಜನ ಹಾವುಗಳಿಂದ ಎಚ್ಚರಿಕೆ ವಹಿಸಬೇಕು ಎಂದು ಅವರು ತಿಳಿಸಿದರು.

ಎಲ್ಲಾದರೂ ತಮ್ಮ ಮನೆ ಏರಿಯಾಗಳಲ್ಲಿ ಹಾವುಗಳು ಕಂಡರೆ ಅವುಗಳನ್ನು ಹೊಡೆದು ಸಾಯಿಸಬೇಡಿ ನಮ್ಮ ಸಂಸ್ಥೆಗೆ ಸಂಪರ್ಕಿಸಿ ನಾವು ಬಂದು ಅವುಗಳನ್ನು ಹಿಡಿದು ಅರಣ್ಯ ಪ್ರದೇಶದಲ್ಲಿ ಬಿಡುತ್ತೇವೆ ಹಾಗಾಗಿ ಯಾರು ಹಾವುಗಳನ್ನು ಕೊಲ್ಲಬೇಡಿ ಎಂದು ಅವರು ಮನವಿ ಮಾಡಿದರು.ಈವರೆಗೂ ನಮ್ಮ ಸಂಸ್ಥೆ 20 ಸಾವಿರಕ್ಕೂ ಅಧಿಕ ಹಾವುಗಳನ್ನು ಹಿಡಿದು, ಸಂರಕ್ಷಣೆಯನ್ನು ಮಾಡಿದ್ದೇವೆ ಎಂದು ಹೇಳಿದರಲ್ಲದೆ, ಹಾವುಗಳ ಬಗ್ಗೆ ಜಾಗೃತಿ ಮೂಡಿದರು.

ಈ ಕುರಿತು ಜಾಗೃತಿ ಮೂಡಿಸುವ ಪೋಸ್ಟರ್‌ಗಳನ್ನು ಸಹ ಬಿಡುಗಡೆ ಮಾಡಿದರು. ಯಾರಿಗಾದರೂ ಹಾವುಗಳನ್ನು ಕಂಡರೆ ನೇರವಾಗಿ ದೂರವಾಣಿ ಸಂಖ್ಯೆ 98800 31600 ಕರೆ ಮಾಡಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಹಾವು ಮತ್ತು ವನ್ಯಜೀವಿಗಳ ಸಂರಕ್ಷಣಾ ವೇದಿಕೆ ಅಧ್ಯಕ್ಷ ಸಮೀರ್ ಸೇಟ್, ತಹೀರ್ ಸೇಟ್ ಕಾರ್ಯದರ್ಶಿ, ಉಪಾಧ್ಯಕ್ಷ ಹೊತ್ತುರು ಸೀರಾಜ್, ಸದಸ್ಯರಾದ ಅಸ್ಲಾಂ ಕೈಸರ್ ಬಾಬು, ಇಸ್ರಾಕೈಸರ್ ಸೇಟ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.